**ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಕೆ.ಆರ್.ವೃತ್ತ, ಬೆಂಗಳೂರು – 560 001**

ಸಂಖ್ಯೆ: ಸಶಿಅ/ಆ/ಸಿ5/ಸಿ.ಆರ್.ಪಿ/ಬಿ.ಆರ್.ಪಿ/ಹು.ಭ/01/2015–16 ದಿನಾಂಕ: 30–03–2016

## ಅಧಿಕೃತ ಜ್ಞಾಪನ

**ವಿಷಯ:** ಬಿ.ಆರ್.ಪಿ ಹಾಗೂ ಸಿ.ಆರ್.ಪಿ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರನ್ನು ಕೌನ್ಸಿಲಿಂಗ್ ಮೂಲಕ ಶಾಲಾ ಶಿಕ್ಷಕರ ಹುದ್ದೆಗಳಿಗೆ ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ: ಸಶಿಅ/ಆ/ಸಿ5/ಸಿ.ಆರ್.ಪಿ/ಬಿ.ಆರ್.ಪಿ/ಹು.ಭ 1/2015–16, ದಿನಾಂಕ: 22.02.2016.

*&*&*&*

ಪ್ರಾಥಮಿಕ ಬಿ.ಆರ್.ಪಿ/ಸಿ.ಆರ್.ಪಿ ಗಳ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಲ್ಲಿ ಎರಡು ಹಂತದ ನೇಮಕಾತಿ ಪ್ರಾಧಿಕಾರದಿಂದ ನೇಮಕಗೊಂಡ ಶಿಕ್ಷಕರು ಇರುತ್ತಾರೆ. ಆದ್ದರಿಂದ ಉಪನಿರ್ದೇಶಕರು ನೇಮಕಾತಿ ಆದೇಶ ನೀಡಿದ ಜಿಲ್ಲಾ ಘಟಕದ ಶಿಕ್ಷಕರಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ನೇಮಕಾತಿ ಆದೇಶ ನೀಡಿರುವ ಬ್ಲಾಕ್ ಘಟಕದ ಶಿಕ್ಷಕರಿಗೆ ಸಂಬಂಧಿಸಿದ ಬ್ಲಾಕ್ ವ್ಯಾಪ್ತಿಯಲ್ಲಿ ಮಾತ್ರ ಸ್ಥಳ ಆಯ್ಕೆಮಾಡಿಕೊಳ್ಳಲು ಅವಕಾಶ ಕಲ್ಪಿಸುವುದು ಎಂದು ಉಲ್ಲೇಖಿತ ಅಧಿಕೃತ ಜ್ಞಾಪನದಲ್ಲಿ ಸೂಚಿಸಲಾಗಿದೆ.

ದಿನಾಂಕ: 31.03.2016 ಕ್ಕೆ 03 ವರ್ಷ ಸೇವೆಯನ್ನು ಪೂರ್ಣಗೊಳಿಸಿರುವ ಎಲ್ಲಾ ಬಿ.ಆರ್.ಪಿ/ಸಿ.ಆರ್.ಪಿ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರನ್ನು ಶಾಲೆಗಳಿಗೆ ಮರುಸ್ಥಳ ನಿಯುಕ್ತಿಗೊಳಿಸುವ ಸಮಯದಲ್ಲಿ **ಮೊದಲು ಬ್ಲಾಕ್ ಹಂತದಲ್ಲಿ ಕೌನ್ಸಿಲಿಂಗ್ ನಡೆಸಿ ನಂತರ ಜಿಲ್ಲಾ ಹಂತದಲ್ಲಿ ಕೌನ್ಸಿಲಿಂಗನ್ನು ನಿಯಮಾನುಸಾರ ನಡೆಸಲು ತಿಳಿಸಿದೆ.**

2015–16ನೇ ಸಾಲಿನಲ್ಲಿ ದಿನಾಂಕ 31.03.2015 ಕ್ಕೆ 3 ವರ್ಷ ಪೂರ್ಣಗೊಳಿಸಿದ ಬಿ.ಆರ್.ಪಿ/ ಸಿ.ಆರ್.ಪಿ ಗಳನ್ನು ಕಡ್ಡಾಯವಾಗಿ ಶಾಲೆಗಳಿಗೆ ಮರು ಸ್ಥಳ ನಿಯುಕ್ತಿಗೊಳಿಸಲು ದಿನಾಂಕ 31.03.2015 ರಲ್ಲಿ ನಿರ್ದೇಶಿಸಲಾಗಿತ್ತು. ಆದಾಗ್ಯೂ 3 ವರ್ಷ ಪೂರ್ಣಗೊಳಿಸಿದವರನ್ನು ಅದೇ ಹುದ್ದೆಗಳಲ್ಲಿ ಮುಂದುವರೆಸುತ್ತಿರುವುದಾಗಿಯೂ ಹಾಗೂ ಕೌನ್ಸಿಲಿಂಗ್ ನಂತರ ಸ್ಥಳ ನಿಯುಕ್ತಿಗೊಂಡ ಶಾಲೆಗಳಿಗೆ ಬಿಡುಗಡೆಗೊಳಿಸದೆ ಬಿ.ಆರ್.ಪಿ/ಸಿ.ಆರ್.ಪಿಗಳಾಗಿಯೇ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ವರದಿಯಾಗಿದೆ. ಅಂತಹ ಬಿ.ಆರ್.ಪಿ/ಸಿ.ಆರ್.ಪಿಗಳನ್ನು ಕೂಡಲೇ ಬಿಡುಗಡೆಗೊಳಿಸಿ ಸ್ಥಳ ನಿಯುಕ್ತಿಗೊಂಡಿದ್ದ ಶಾಲೆಗಳಿಗೆ ಹಾಜರಾಗಲು ಸೂಚಿಸುವುದು. ಒಂದು ವೇಳೆ, ಇಂತಹ ಬಿ.ಆರ್.ಪಿ/ಸಿ.ಆರ್.ಪಿಗಳನ್ನು ಮುಂದುವರೆಯಲು ಅವಕಾಶ ಮಾಡಿರುವುದನ್ನು ಗಮನಿಸಿದಲ್ಲಿ, ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರ ವಿರುದ್ಧ ನಿಯಮಾನುಸಾರ ಶಿಸ್ತಿನ ಕ್ರಮವನ್ನು ಜರುಗಿಸಲಾಗುವುದು.

ಸಹಿ/- 30/3/16

**ರಾಜ್ಯ ಯೋಜನಾ ನಿರ್ದೇಶಕರು**
**ಸರ್ವ ಶಿಕ್ಷಣ ಅಭಿಯಾನ**

**ಆಯುಕ್ತರು**
**ಸಾರ್ವಜನಿಕ ಶಿಕ್ಷಣ ಇಲಾಖೆ**

**ಇವರಿಗೆ ಕ್ರಮಕ್ಕಾಗಿ**

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ ಡಯಟ್) ಸೂಕ್ತ ಕ್ರಮಕ್ಕಾಗಿ.
3) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಅಗತ್ಯ ಕ್ರಮಕ್ಕಾಗಿ.

**ಪ್ರತಿ ಸಂಬಂಧಿಸಿದವರಿಗೆ ಮಾಹಿತಿಗೆ ಕಳುಹಿಸಿದೆ:**

1) ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳುರು
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3) ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು.
4) ಹೆಚ್ಚುವರಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5) ಹೆಚ್ಚುವರಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
6) ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
7) ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು.
8) ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು.